# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 140
ಸದಸ್ಯರ ಹೆಸರು : ಡಾ. ಯತೀಂದ್ರ ಎಸ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 10-12-2024
ಉತ್ತರಿಸುವ ಸಚಿವರು : ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಒಟ್ಟು ಎಷ್ಟು "ಸ್ಮಾರ್ಟ್ ಸಿಟಿ" ಯೋಜನೆಗಳನ್ನು ಘೋಷಿಸಲಾಗಿದೆ; (ಪೂರ್ಣ ವಿವರ ನೀಡುವುದು) | ಕೇಂದ್ರ ಹಾಗೂ ರಾಜ್ಯ ಸರ್ಕಾರ ಪ್ರಾಯೋಜಿತ ಸ್ಮಾರ್ಟ್ ಸಿಟಿ ಅಭಿಯಾನದಡಿ ರಾಜ್ಯದ ಏಳು ನಗರಗಳಾದ ಬೆಳಗಾವಿ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಬೆಂಗಳೂರು ನಗರಗಳು ಆಯ್ಕೆಯಾಗಿರುತ್ತವೆ. |
| ಆ) | ಸ್ಮಾರ್ಟ್ ಸಿಟಿ ಯೋಜನೆಗಳಿಗೆ ಈವರೆಗೆ ನೀಡಿರುವ ಒಟ್ಟು ಅನುದಾನವೆಷ್ಟು;<br>ಈ ಒಟ್ಟು ಅನುದಾನದಲ್ಲಿ ಕೇಂದ್ರದಿಂದ ಬಂದ ಪಾಲೆಷ್ಟು; | ಸ್ಮಾರ್ಟ್ ಸಿಟಿ ಅಭಿಯಾನದಡಿ ಏಳು ಸ್ಮಾರ್ಟ್ ಸಿಟಿಗಳಿಗೆ ಇಲ್ಲಿಯವರೆಗೆ ಕೇಂದ್ರ ಸರ್ಕಾರದಿಂದ ರೂ.3,372.88 ಕೋಟಿ ಹಾಗೂ ರಾಜ್ಯ ಸರ್ಕಾರದಿಂದ ರೂ.3,444.87 ಕೋಟಿ ಸೇರಿದಂತೆ ಒಟ್ಟು ರೂ.6,817.75 ಕೋಟಿ ಅನುದಾನ ಬಿಡುಗಡೆಯಾಗಿರುತ್ತದೆ. |
| ಇ) | ಈವರೆಗೆ ರಾಜ್ಯದಲ್ಲಿ ಎಷ್ಟು ಸ್ಮಾರ್ಟ್ ಸಿಟಿ ಯೋಜನೆಗಳು ಪೂರ್ಣಗೊಂಡಿವೆ;<br>ಅಪೂರ್ಣಗೊಂಡಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು? | ಸ್ಮಾರ್ಟ್ ಸಿಟಿ ಅಭಿಯಾನದಡಿ ಏಳು ಸ್ಮಾರ್ಟ್ ಸಿಟಿಗಳಲ್ಲಿ ಸ್ಮಾರ್ಟ್ ಸಿಟಿ ಅನುದಾನ ಹಾಗೂ ಪಿಪಿಪಿ ಮಾದರಿಯಡಿ ಒಟ್ಟು 690 ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಈ ಪೈಕಿ 631 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಉಳಿದ 59 ಕಾಮಗಾರಿಗಳನ್ನು ಸ್ಮಾರ್ಟ್ ಸಿಟಿ ಯೋಜನಾ ಅವಧಿಯಾದ ಮಾರ್ಚ್ 2025ರ ಒಳಗಾಗಿ ಪೂರ್ಣಗೊಳಿಸುವಂತೆ ನಿರ್ದೇಶಿಸಲಾಗಿದೆ. |

ಸಂಖ್ಯೆ: ನಅಇ 235 ಸಿಎಸ್‌ಎಸ್ 2024

(ಬಿ.ಎಸ್.ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು